ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಸಭಾಂಗಣದಲ್ಲಿ ದಿನಾಂಕ 18-6-2013 ರಂದು ಕೊಠಡಿ ಸಂ. 252. ಬಹುಮಹಡಿ ಕಟ್ಟಡ, ಬೆಂಗಳೂರಿನಲ್ಲಿ ಜರುಗಿದ ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ವ್ಯವಸ್ಥಾಪನಾ ಮಂಡಳಿಯ ಹದಿನೈದನೇಯ ಸಭೆಯ ನಡುವಳಿಗಳು:

ಉಪಸ್ಥಿತರಿದ್ದ ಸದಸ್ಯರು:

| | | |
|---|---|---|
| 1. | ಡಾ. ಬಿ.ವಿ. ಪಾಟೀಲ | ಅಧ್ಯಕ್ಷರು |
| 2. | ಶ್ರೀ ಶ್ರೀ ಭರತ್‌ಲಾಲ್ ಮೀನಾ | ಸದಸ್ಯರು |
| 3. | ಶ್ರೀ ಎಂ.ಕೆ. ಶಂಕರಲಿಂಗೇ ಗೌಡ | ಸದಸ್ಯರು |
| 4. | ಶ್ರೀ ಎಂ.ಎಸ್. ಗೌಡರ್ | ಸದಸ್ಯರು |
| 5. | ಶ್ರೀಮತಿ ಮಂಜುಳ ಗೀತಾ ಎನ್. | ಸದಸ್ಯರು |
| 6. | ಶ್ರೀ ಹೆಚ್.ಎಸ್. ಸಾದತ್ ಅಲಿ ಖಾನ್ | ಸದಸ್ಯರು |
| 7. | ಶ್ರೀ ಪ್ರವೀಣ ವಿ. ನಾಯಕ್ | ಸದಸ್ಯರು |
| 8. | ಶ್ರೀಮತಿ ನಫೀಸ್ ಫಾತಿಮ | ಸದಸ್ಯರು |
| 9. | ಡಾ. ಪಿ. ಬಾಲಕೃಷ್ಣನ್ | ಸದಸ್ಯರು |
| 10. | ಡಾ. ಜಿ.ಕೆ. ವಸಂತಕುಮಾರ | ವಿಶೇಷ ಆಹ್ವಾನಿತರು |
| 11 | ಡಾ. ಡಿ.ಪಿ. ಬಿರಾದಾರ | ಸದಸ್ಯ-ಕಾರ್ಯದರ್ಶಿ |

ಪ್ರಾರಂಭದಲ್ಲಿ, ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನೈದನೇಯ ಸಭೆಗೆ ಸರ್ವಸದಸ್ಯರನ್ನು ಹಾಗೂ ಹೊಸದಾಗಿ ನೇಮಕಗೊಂಡ ಸದಸ್ಯರನ್ನು ಮಾನ್ಯ ಕುಲಪತಿಗಳು ಹಾಗೂ ಅಧ್ಯಕ್ಷರು ಸ್ವಾಗತ ಕೋರಿದರು. ತದನಂತರ, ಕಾರ್ಯಸೂಚಿಯ ಪ್ರಕಾರ ಚರ್ಚಿಸಿ ಕೆಳಕಂಡಂತೆ ತೀರ್ಮಾನಗಳನ್ನು ಕೈಗೊಳ್ಳಲಾಯಿತು.

| | |
|---|---|
| ಅನುಕ್ರಮ ಸಂ: 1 | ದಿನಾಂಕ 18-5-2013 ರಂದು ಜರುಗಿದ ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನಾಲ್ಕನೇಯ ಸಭೆಯ ನಡುವಳಿಗಳನ್ನು ಸ್ಥಿರೀಕರಿಸುವುದು ಮತ್ತು ಅವುಗಳ ಪ್ರಕಾರ ಕೈಗೊಂಡ ಕ್ರಮಗಳನ್ನು ಅನುಮೋದಿಸುವುದು |

ಠರಾವು:

ದೀರ್ಘ ಚರ್ಚೆಯ ನಂತರ ಮಾನ್ಯ ವ್ಯವಸ್ಥಾಪನಾ ಮಂಡಳಿಯ ಹದಿನಾಲ್ಕನೇಯ ಸಭೆಯ ನಡುವಳಿಕೆಗಳನ್ನು ಓದಲಾಯಿತೆಂದು ಪರಿಗಣಿಸಿ, ಸ್ಥಿರೀಕರಿಸಲಾಯಿತು. ಮುಂದುವರೆದು, ಅವುಗಳ ಪ್ರಕಾರ ಕೈಕೊಂಡ ಕ್ರಮಗಳಿಗೆ ಮಾನ್ಯ ವ್ಯವಸ್ಥಾಪನಾ ಮಂಡಳಿಯು ಅನುಮೋದನೆ ನೀಡಿತು.

(ಕ್ರಮ : ಕುಲಸಚಿವರು)

| | |
|---|---|
| ಅನುಕ್ರಮ ಸಂ: 2 | ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಪರಿನಿಯಮಗಳಿಗೆ ಒಪ್ಪಿಗೆ ನೀಡುವ ಕುರಿತು |

ಠರಾವು:

ವಿಶ್ವವಿದ್ಯಾಲಯದ ಪ್ರಸ್ತಾವಿತ ಶಾಸನಗಳ ಕುರಿತು ವಿಸ್ತೃತ ಚರ್ಚೆಯ ನಂತರ, ಇದು ರಾಜ್ಯದ ಇತರೆ ವಿಶ್ವವಿದ್ಯಾಲಯಗಳಲ್ಲಿಯೂ ಏಕರೂಪದಲ್ಲಿರುವಂತೆ ಗಮನಕ್ಕೆ ತೆಗೆದುಕೊಳ್ಳಲು ಒತ್ತು ನೀಡಲಾಯಿತು. ಡಿ.ಪಿ.ಎ.ಆರ್. ನ ಸಲಹೆಗಳನ್ನು ಮತ್ತು ಡಿ.ಪಿ.ಎಲ್. ನ ತಿದ್ದುಪಡಿಗಳನ್ನು ಕಾರ್ಯಗತ ಮಾಡಿಕೊಳ್ಳಲು ಹಾಗೂ ಶೀಘ್ರಲಿಪಿಗಾರರ ಪದೋನ್ನತಿಗಾಗಿ ಪ್ರಸ್ತಾಪಿಸಿದ ಹಿರಿಯ ಕಾರ್ಯದರ್ಶಿಯ ವೇತನ ಶ್ರೇಣಿಯನ್ನು ಕಡಿಮೆಗೊಳಿಸಲು ಸಲಹೆ ನೀಡಲಾಯಿತು. ಸಂಪುಟ ಸಭೆಯಲ್ಲಿ ಇದಕ್ಕೆ ಅನುಮೋದನೆ ದೊರೆತ ನಂತರ, ಈ ಕುರಿತು ಸಲಹೆ ಅಥವ ಮಾರ್ಪಾಡುಗಳೇನಾದರೂ ಇದ್ದಲ್ಲಿ 30 ದಿನಗಳ ಕಾಲಾವಕಾಶ ನೀಡಲಾಗುವುದೆಂದು ತಿಳಿಯಪಡಿಸಲಾಯಿತು.

ಕುಲಸಚಿವರು ಹಾಗೂ ವ್ಯವಸ್ಥಾಪನಾ ಮಂಡಳಿಯ ಸದಸ್ಯ-ಕಾರ್ಯದರ್ಶಿಯವರ ಧನ್ಯವಾದಗಳೊಂದಿಗೆ ಸಭೆಯು ಮುಕ್ತಾಯಗೊಂಡಿತು.

| | |
|---|---|
| ಸಹಿ /- 18-7-2013 | ಸಹಿ /- 18-7-2013 |
| (ಬಿ.ವಿ. ಪಾಟೀಲ) | (ಡಿ.ಪಿ. ಬಿರಾದಾರ) |
| ಕುಲಪತಿಗಳು ಹಾಗೂ ಅಧ್ಯಕ್ಷರು | ಕುಲಸಚಿವರು ಹಾಗೂ ಸದಸ್ಯ-ಕಾರ್ಯದರ್ಶಿ |
| ವ್ಯವಸ್ಥಾಪನಾ ಮಂಡಳಿ, ಕೃವಿವಿ ರಾಯಚೂರು. | ವ್ಯವಸ್ಥಾಪನಾ ಮಂಡಳಿ, ಕೃವಿವಿ ರಾಯಚೂರು. |

(ಡಿ.ಪಿ. ಬಿರಾದಾರ)
ಕುಲಸಚಿವರು ಹಾಗೂ ಸದಸ್ಯ-ಕಾರ್ಯದರ್ಶಿ
ವ್ಯವಸ್ಥಾಪನಾ ಮಂಡಳಿ, ಕೃವಿವಿ ರಾಯಚೂರು.